# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 1061 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:20-02-2020.

## ಸುತ್ತೋಲೆ

ವಿಷಯ: 2020-21ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಗುರುತಿಸಿ, ಹಾಜರಾಗುವಂತೆ ಮಾಡಲು ಸ್ಥಳೀಯ ಸಂಸ್ಥೆಗಳು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ

ಉಲ್ಲೇಖ:
1) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 1061 ಗ್ರಾಪಂಅ 2019, ದಿನಾಂಕ: 11.12.2019.
2) ಸರ್ಕಾರದ ಇದೇ ಸಮ ಸಂಖ್ಯೆಯ ಪತ್ರ ದಿನಾಂಕ: 16.12.2019.
3) ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:15768/2013 ರ ವಿಚಾರಣೆ ಸಂದರ್ಭದಲ್ಲಿ ನೀಡಿದ ಆದೇಶ ದಿನಾಂಕ18.12.2019.

**********

ಭಾರತ ಸಂವಿಧಾನದ ಕಲಂ 21(ಎ) ಪ್ರಕಾರ 6 ರಿಂದ 14 ವರ್ಷದ ಪ್ರತಿ ಮಗು 8 ವರ್ಷಗಳ ಶಾಲಾ ಶಿಕ್ಷಣವನ್ನು ಪಡೆಯುವುದು ಮೂಲಭೂತ ಹಕ್ಕಾಗಿರುತ್ತದೆ. ಉಲ್ಲೇಖ (1) ರ ಸುತ್ತೋಲೆ ಮತ್ತು ಉಲ್ಲೇಖ (2) ರ ಸರ್ಕಾರದ ಪತ್ರದಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲಾ ಮುಖ್ಯವಾಹಿನಿಗೆ ತರಲು ಸ್ಥಳೀಯ ಸರ್ಕಾರಗಳು ಕೈಗೊಳ್ಳಬೇಕಾದ ಕಾರ್ಯಕ್ರಮದ ಮಾರ್ಗಸೂಚಿಗಳ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲಾ ಮುಖ್ಯವಾಹಿನಿಗೆ ತರಲು The Karnataka Right of Children to Free and Compulsory Education Rules, 2012 ರನ್ವಯ ಗ್ರಾಮ ಪಂಚಾಯಿತಿಗಳು ಗ್ರಾಮ ಶಿಕ್ಷಣ ರಿಜಿಸ್ಟರ್‌ನ್ನು ನಿರ್ವಹಿಸಬೇಕಾಗಿರುತ್ತದೆ. ಈ ಬಗ್ಗೆ ಉಲ್ಲೇಖ (1) ರ ಸುತ್ತೋಲೆಯಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳು ಗ್ರಾಮ ಶಿಕ್ಷಣ ರಿಜಿಸ್ಟರ್ ನಿರ್ವಹಿಸಲು ತಿಳಿಸಲಾಗಿದೆ. The Karnataka Right of Children to Free and Compulsory Education (Amendment) Rules, 2014 ರನ್ವಯ ಮಕ್ಕಳ ಹಾಜರಾತಿಗೆ ಸಂಬಂಧಿಸಿದಂತೆ ಸ್ಥಳೀಯ ಸಂಸ್ಥೆಗಳು ನಿರ್ವಹಿಸಬೇಕಾದ ಜವಾಬ್ದಾರಿಗಳ ಬಗ್ಗೆ ತಿಳಿಸಲಾಗಿದೆ.

**ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 58 ರಲ್ಲಿ ಗ್ರಾಮ ಪಂಚಾಯಿತಿಯ ಪ್ರಕಾರ್ಯಗಳ ಬಗ್ಗೆ ವಿವರಿಸಲಾಗಿದ್ದು, ಅದರಲ್ಲಿ ಗ್ರಾಮ ಪಂಚಾಯಿತಿಯು ಪ್ರಾಥಮಿಕ ಶಾಲೆಗೆ ಮಕ್ಕಳ ಸಾರ್ವತ್ರಿಕ ದಾಖಲಾತಿಯನ್ನು ಖಚಿತಪಡಿಸಿಕೊಳ್ಳುವುದು ಪ್ರಮುಖವಾದ ಕಡ್ಡಾಯ ಕಾರ್ಯವಾಗಿರುತ್ತದೆ.**

ಉಲ್ಲೇಖ (3) ರ ರಿಟ್ ಪಿಟಿಷನ್ ವಿಚಾರಣೆ ಸಂದರ್ಭದಲ್ಲಿ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಈ ಕೆಳಕಂಡಂತೆ ಆದೇಶಿಸಿರುತ್ತದೆ.

**"We make it clear the responsibility of carrying out a door-to-door survey shall be of the local authorities and the task cannot be delegated to the teachers in the schools. While carrying out the survey, in case of students who have permanently abandoned the school, the registration number of the students can be of a great help. This aspect shall be borne in mind by the local authorities."**

ಪ್ರಕರಣವು ಉಚ್ಚ ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿದ್ದು, ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ತರಲು ನಿಖರವಾದ ಕ್ರಮಗಳನ್ನು ಸರ್ಕಾರದ ವತಿಯಿಂದ ಕೈಗೊಂಡು ಮಾನ್ಯ ನ್ಯಾಯಾಲಯಕ್ಕೆ ಅನುಪಾಲನಾ ವರದಿ ಸಲ್ಲಿಸಬೇಕಾಗಿರುತ್ತದೆ.

ಮೇಲ್ಕಂಡ ಆದೇಶದ ಹಿನ್ನೆಲೆಯಲ್ಲಿ, ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಸೇರಿಸಲು ಕಟ್ಟುನಿಟ್ಟಿನ ಕ್ರಮಕೈಗೊಳ್ಳುವುದು ಅವಶ್ಯವಾಗಿದೆ. ಈ ಕಾರ್ಯದಲ್ಲಿ ಮಾನ್ಯ ನ್ಯಾಯಾಲಯವು ಆದೇಶಿಸಿರುವಂತೆ ಸ್ಥಳೀಯ ಗ್ರಾಮ ಪಂಚಾಯಿತಿಗಳು ಪ್ರಮುಖ ಪಾತ್ರ ವಹಿಸಬೇಕಾಗಿರುತ್ತದೆ. ಈ ದಿಶೆಯಲ್ಲಿ ಮುಂದಿನ ಒಂದು ವರ್ಷದವರೆಗೆ ಕೈಗೊಳ್ಳಬೇಕಾದ ಕಾರ್ಯ ಯೋಜನೆಯನ್ನು ಈ ಕೆಳಗಿನಂತೆ ಗುರುತಿಸಲಾಗಿದೆ.

- ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಸ್ಥಳೀಯ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಅಧ್ಯಕ್ಷರು, ಶಾಲಾ ಮುಖ್ಯೋಪಾಧ್ಯಾಯರು, ಅಂಗನವಾಡಿ ಮೇಲ್ವಿಚಾರಕರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಹಾಗೂ ಮಹಿಳಾ ಸ್ವ-ಸಹಾಯ ಸಂಘದ ಪ್ರತಿನಿಧಿಗಳನ್ನು ಒಳಗೊಂಡಂತೆ ಸಭೆ ನಡೆಸಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ಶಾಲೆಗೆ ಮರಳಿ ಸೇರಿಸಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಬೇಕು.
- ಗ್ರಾಮ ಪಂಚಾಯಿತಿಯ ಎಲ್ಲಾ ಶಾಲೆಗಳ ವ್ಯಾಪ್ತಿಯಲ್ಲಿ ಶಾಲೆಗೆ ಸೇರದ, ಸೇರಿ ಗೈರು ಹಾಜರಾಗುತ್ತಿರುವ ಮಕ್ಕಳ ಸಮೀಕ್ಷೆಯನ್ನು ನಡೆಸಿ ಗುರುತಿಸಬೇಕು.
- ಶಾಲೆಗೆ ಸೇರದ ಹಾಗೂ ಸೇರಿಯೂ ಹಾಜರಾಗದ ಮಗುವಿನ ಹಿನ್ನೆಲೆಯನ್ನು ತಿಳಿದುಕೊಳ್ಳಲು ಪ್ರಯತ್ನಿಸಬೇಕು. ಕಾರಣಗಳು ಪ್ರಮುಖವಾಗಿ ಈ ಕೆಳಕಂಡಂತೆ ಇರಬಹುದು.
  1) ಪೋಷಕರು ಕೆಲಸದ ನಿಮಿತ್ತ ಮಗು ಸಮೇತ ಹೊರ ಗ್ರಾಮಗಳಿಗೆ ಹೋಗಿರಬಹುದು.
  2) ಮನೆ ಕೆಲಸದಲ್ಲಿ ನೆರವಾಗಲು ಮಗುವನ್ನು ಶಾಲೆಗೆ ಕಳುಹಿಸದಿರಬಹುದು.
  3) ಮಕ್ಕಳನ್ನು ಬಾಲ ಕಾರ್ಮಿಕರನ್ನಾಗಿ ದುಡಿಸುತ್ತಿರಬಹುದು.
  4) ಬಾಲ್ಯ ವಿವಾಹ ಹಾಗೂ ಇನ್ನಿತರ ಮೂಢನಂಬಿಕೆಗಳಿಂದ ಮಗುವನ್ನು ಶಾಲೆಗೆ ಕಳುಹಿಸದಿರಬಹುದು.
- ಗೈರು ಹಾಜರಿ ಹಾಗೂ ದಾಖಲಾಗದ ಮಕ್ಕಳ ಹಿನ್ನೆಲೆಯನ್ನು ತಿಳಿದು ಪೋಷಕರಿಗೆ ಶಾಲಾ ಶಿಕ್ಷಣದ ಮಹತ್ವವನ್ನು ಮನವರಿಕೆ ಮಾಡಿ ಮಗು ಶಾಲೆಗೆ ದಾಖಲಾಗುವಂತೆ, ದಾಖಲಾಗಿದ್ದಲ್ಲಿ ಹಾಜರಾಗುವಂತೆ ಮಾಡಲು ವಿಶೇಷ ಮನವೊಲಿಕೆ ಕಾರ್ಯಕ್ರಮ ಹಮ್ಮಿಕೊಳ್ಳಬೇಕು.
- ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹೀಗೆ ಗುರುತಿಸಲಾದ ಎಲ್ಲಾ ಮಕ್ಕಳ ವಿವರವನ್ನು ನಿಗದಿತ ನಮೂನೆಯಲ್ಲಿ ನಿರ್ವಹಿಸಬೇಕು ಹಾಗೂ ಗ್ರಾಮ ಶಿಕ್ಷಣ ವಹಿಯಲ್ಲಿಯೂ ನಮೂದಿಸಬೇಕು.
- ಈ ಪ್ರಕ್ರಿಯೆಯಲ್ಲಿ ದಾಖಲಾದ, ಹಾಜರಾದ ಮಕ್ಕಳು ನಿರಂತರವಾಗಿ ಶಾಲೆಗೆ ಹಾಜರಾಗುತ್ತಿರುವುದನ್ನು ಖಾತರಿಪಡಿಸಿಕೊಳ್ಳಲು ಸತತವಾಗಿ ನಿಗಾವಹಿಸಬೇಕು.
- ಈ ಪ್ರಕ್ರಿಯೆ ವರ್ಷದಾದ್ಯಂತ ಮುಂದುವರೆಯಬೇಕು. ಮಾಸಿಕವಾಗಿ ಕಾರ್ಯ ಚಟುವಟಿಕೆಗಳನ್ನು ಈ ಕೆಳಕಂಡಂತೆ ವಿಂಗಡಿಸಬಹುದು.

1) ಏಪ್ರಿಲ್-2020 – ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಸ್ಥಳೀಯ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಅಧ್ಯಕ್ಷರು, ಶಾಲಾ ಮುಖ್ಯೋಪಾಧ್ಯಾಯರು, ಅಂಗನವಾಡಿ ಮೇಲ್ವಿಚಾರಕರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಮತ್ತು ಮಹಿಳಾ ಸ್ವ-ಸಹಾಯ ಸಂಘದ ಪ್ರತಿನಿಧಿಗಳನ್ನು ಒಳಗೊಂಡಂತೆ ಸಭೆ ನಡೆಸಿ ಕಾರ್ಯಕ್ರಮದ ಮಹತ್ವವನ್ನು ಮನವರಿಕೆ ಮಾಡುವುದು.

2) ಮೇ-2020 – ಮೇಲ್ಕಂಡವರು ತಮ್ಮ ಶಾಲಾ ವ್ಯಾಪ್ತಿಯಲ್ಲಿ ಮಹಿಳಾ ಸ್ವ-ಸಹಾಯ ಸಂಘಗಳ ಪ್ರತಿನಿಧಿಗಳ ಮೂಲಕ ಸಮೀಕ್ಷೆ ನಡೆಸಿ ಶಾಲೆಗೆ ದಾಖಲಾಗದ, ದಾಖಲಾದರೂ ಹಾಜರಾಗದ ಮಕ್ಕಳನ್ನು ಗುರುತಿಸುವುದು. ವಿಶೇಷ ಮನವೊಲಿಕೆ ಕಾರ್ಯಕ್ರಮ ಅವಶ್ಯವಿದ್ದಲ್ಲಿ ಸಂಬಂಧಿಸಿದ ಶಾಲೆಯ ಮುಖ್ಯ ಶಿಕ್ಷಕರಿಂದ ಹಮ್ಮಿಕೊಳ್ಳುವುದು.

3) ಜೂನ್-2020 – ಮೇಲ್ಕಂಡಂತೆ ಸಮೀಕ್ಷೆಯಲ್ಲಿ ಗುರುತಿಸಲಾದ ಮಕ್ಕಳನ್ನು ಶಾಲೆಗೆ ದಾಖಲಿಸಲು ಹಾಗೂ ಹಾಜರಾಗುವಂತೆ ಮಾಡಲು ಕ್ರಮ ವಹಿಸುವುದು.

4) ಜುಲೈ-ಆಗಸ್ಟ್ 2020 – ಮೇಲ್ಕಂಡಂತೆ ದಾಖಲಿಸಲಾದ ಮಕ್ಕಳು ಹಾಜರಾಗುತ್ತಿರುವುದನ್ನು ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡವರು ಶಾಲೆಗೆ ಭೇಟಿ ನೀಡಿ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.

5) ಸೆಪ್ಟೆಂಬರ್- 2020 – ಗ್ರಾಮ ಪಂಚಾಯಿತಿ ವತಿಯಿಂದ ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡವರೊಡನೆ ಸಭೆ ನಡೆಸಿ ಶಾಲೆಗೆ ದಾಖಲಾದ ಮಕ್ಕಳ ಹಾಜರಾತಿ ಹಾಗೂ ಶೈಕ್ಷಣಿಕ ಪ್ರಗತಿ ಬಗ್ಗೆ ಪರಿಶೀಲನೆ.

6) ಅಕ್ಟೋಬರ್-ನವೆಂಬರ್ – 2020 – ಮೇಲ್ಕಂಡಂತೆ ದಾಖಲಿಸಲಾದ ಮಕ್ಕಳು ಹಾಜರಾಗುತ್ತಿರುವುದನ್ನು ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡವರು ಶಾಲೆಗೆ ಭೇಟಿ ನೀಡಿ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.

7) ಡಿಸೆಂಬರ್-2020 – ಗ್ರಾಮ ಪಂಚಾಯಿತಿ ವತಿಯಿಂದ ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡವರೊಡನೆ ಸಭೆ ನಡೆಸಿ ಶಾಲೆಗೆ ದಾಖಲಾದ ಮಕ್ಕಳ ಹಾಜರಾತಿ ಹಾಗೂ ಶೈಕ್ಷಣಿಕ ಪ್ರಗತಿ ಬಗ್ಗೆ ಪರಿಶೀಲನೆ ನಡೆಸುವುದು.

8) ಜನವರಿ-ಫೆಬ್ರವರಿ-2021 – ಮೇಲ್ಕಂಡಂತೆ ದಾಖಲಿಸಲಾದ ಮಕ್ಕಳು ಹಾಜರಾಗುತ್ತಿರುವುದನ್ನು ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡವರು ಶಾಲೆಗೆ ಭೇಟಿ ನೀಡಿ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.

9) ಮಾರ್ಚ್- 2021 – ಗ್ರಾಮ ಪಂಚಾಯಿತಿ ವತಿಯಿಂದ ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡವರೊಡನೆ ಸಭೆ ನಡೆಸಿ ಶಾಲೆಗೆ ದಾಖಲಾದ ಮಕ್ಕಳ ಹಾಜರಾತಿ ಹಾಗೂ ಶೈಕ್ಷಣಿಕ ಪ್ರಗತಿ ಬಗ್ಗೆ ಪರಿಶೀಲನೆ ನಡೆಸುವುದು.

10) ಏಪ್ರಿಲ್-2021 ರಲ್ಲಿ ಇಡೀ ವರ್ಷದಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳ ದಾಖಲಾತಿ-ಹಾಜರಾತಿ ಪ್ರಕ್ರಿಯೆಯಲ್ಲಿ ಆದ ಪ್ರಗತಿ ಪರಾಮರ್ಶೆ ಮಾಡಿ ಮುಂದಿನ ವರ್ಷ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಕಾರ್ಯಯೋಜನೆ ಸಿದ್ಧಪಡಿಸುವುದು.

11) ಗ್ರಾಮ ಪಂಚಾಯಿತಿಗಳು ಈ ಪ್ರಕ್ರಿಯೆಗೆ ತಗಲುವ ಸಾಂದರ್ಭಿಕ ವೆಚ್ಚಗಳನ್ನು ಗ್ರಾಮ ಪಂಚಾಯಿತಿ ಸ್ವಂತ ಸಂಪನ್ಮೂಲದಿಂದ ಭರಿಸುವುದು.

12) ಶಿಕ್ಷಣ ಇಲಾಖೆ ವತಿಯಿಂದ ಪ್ರತಿ ಗ್ರಾಮ ಪಂಚಾಯಿತಿಗೆ ನೀಡುವ ರೂ. 1,000/- ಗಳನ್ನು ಮಹಿಳಾ ಗ್ರಾಮ ಪಂಚಾಯತಿಗಳು ಆಯ್ಕೆ ಮಾಡಿದ ಮಹಿಳಾ ಸ್ವ-ಸಹಾಯ ಗುಂಪುಗಳ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟಕ್ಕೆ ಈ ಉದ್ದೇಶಕ್ಕಾಗಿ ಬಳಸಿಕೊಳ್ಳಲು ಬಿಡುಗಡೆ ಮಾಡವುದು.

13) ಶಾಲೆಯಿಂದ ಹೊರಗುಳಿದ ಮಕ್ಕಳ ದಾಖಲಾತಿ-ಹಾಜರಾತಿ ಪ್ರಕ್ರಿಯೆಯನ್ನು ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು, ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲುಸ್ತುವಾರಿ ಮಾಡಿ ನೆರವು, ಮಾರ್ಗದರ್ಶನ ನೀಡುವುದು.

14) ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಮೇಲುಸ್ತುವಾರಿ ಮಾಡಿ ನೆರವು, ಮಾರ್ಗದರ್ಶನ ನೀಡುವುದು. ಜಿಲ್ಲೆಯ ವ್ಯಾಪ್ತಿಯಲ್ಲಿ ಸಾಧಿಸಿದ ಪ್ರಗತಿಯನ್ನು ಒಗ್ಗೂಡಿಸಿ ಸರ್ಕಾರಕ್ಕೆ ವರದಿ ಮಾಡುವುದು.

ಮೇಲೆ ವಿವರಿಸಿರುವಂತೆ, ಕ್ರಮಕೈಗೊಂಡು, ಭಾರತ ಸಂವಿಧಾನ, The Karnataka Right of Children to Free and Compulsory Education Rules, 2012 ಮತ್ತು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಆಶಯವನ್ನು, ಹಾಗೂ ಮಾನ್ಯ ಉಚ್ಛ ನ್ಯಾಯಾಲಯದ ಆದೇಶವನ್ನು ಪಾಲನೆ ಮಾಡುವ ಮೂಲಕ ಮಕ್ಕಳ ಶಿಕ್ಷಣದ ಹಕ್ಕನ್ನು ಜಾರಿಗೊಳಿಸಲು ಎಲ್ಲಾ ಗ್ರಾಮ ಪಂಚಾಯಿತಿಗಳು ಕಟ್ಟುನಿಟ್ಟಿನ ಕ್ರಮಕೈಗೊಳ್ಳಲು ತಿಳಿಸಿದೆ.

(ಎಸ್.ಆರ್. ಉಮಾಶಂಕರ್, ಭಾ.ಆ.ಸೇ.,)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ

(ಉಮಾ ಮಹದೇವನ್, ಭಾ.ಆ.ಸೇ.,)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಉಪ ನಿರ್ದೇಶಕರುಗಳು, ಸಾರ್ವಜನಿಕ ಶಿಕ್ಷಣ ಇಲಾಖೆ.
3) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
4) ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ.
5) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು-1.
5) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
6) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
7) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿರವರು.
8) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
9) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

VER / WER.

**Record of Children**
**Village / Ward Education Register (VER)**
**(to be maintained by Village Panchayat / Local authorities under section 9 (d) of RTE Act )**
**5 to 14 + age group children who are in school / out of school children**

District : ____________
Cluster: ____________
Habitation: ____________

Block: ____________
Panchayat/ward: ____________
Name of the centre school: ____________

| Sl. No. | Census form no. | Photo of the child | Name of the child | Name of the father / Guardian & address, occup ation | Name of the mother | Date of birth of the child | Age in completed years | caste (code no.)and whether the child belongs to disadvantaged /weaker section as per Sec.2 | Sex Boy-1 Girl-2 | If child with special needs | If going to school, give details starting from pre-primary to present class | | | If not going to school | | If never enrolled or never gone to school. (Yes-1 No-2) | Details of special training & mainstr eaming name of the school & class admission No. | If not, details of special training, residential facility required |
|---|---|---|---|---|---|---|---|---|---|---|---|---|---|---|---|---|---|---|
| | | | | | | | | | | | Name of the school | Class (1 to 8) | Admission No. | class in which left the school (1 to 8) | Reasons for leaving the school (code No.) | | | |
| 1 | 2 | 3 | 4 | 5 | 6 | 7 | 8 | 9 | 10 | 11 | 12 | 13 | 14 | 15 | 16 | 17 | 18 | 19 |
| | | | | | | | | | | | | | | | | | | |
| | | | | | | | | | | | | | | | | | | |

Note:-

1) The details of all the children in the habitation in the age group of 5 to 14 years who are going to school and not going to school shall be entered in the VER.
2) Every Grama Panchayat / Local authority shall maintain the record of children in the habitations coming under its jurisdiction.
3) It shall be updated once in 3 months ( $30^{th}$ of June, September, December and March every year)
4) Record of children shall be computerised and to be entered in online child tracking software developed by SSA. to be displayed in the public domain. in all the schools under its jurisdiction.

Signature of Chairman, Local Authority
& P.D.O